# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ ರವರು ನಿಯಮ 72 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ

**ಪ್ರಶ್ನೆ:** ರಾಜ್ಯದಲ್ಲಿ ತೆಂಗು ಬೆಳೆಯನ್ನು ವಿಪರೀತವಾಗಿ ಕಾಡುತ್ತಿರುವ ಕಪ್ಪು ತಲೆ ಹುಳುವಿನ ಬಾಧೆಯಿಂದಾಗಿ ತೆಂಗಿನ ಮರಗಳು ಸಂಪೂರ್ಣವಾಗಿ ಒಣಗಿ ಇಡೀ ತೋಟಗಳೇ ನಾಶವಾಗುತ್ತಿರುವುದರಿಂದ, ಬಹುವಾರ್ಷಿಕ ನಿರೀಕ್ಷಿತ ಆದಾಯವನ್ನು ಶಾಶ್ವತವಾಗಿ ಕಳೆದುಕೊಂಡು ತೆಂಗು ಬೆಳೆಗಾರರು ಅತೀವ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಕಪ್ಪು ತಲೆ ಹುಳುವಿನ ಬಾಧೆಯಿಂದಾಗಿ ತೆಂಗಿನ ಮರಗಳು ಒಣಗಿ ಹೋಗುತ್ತಿರುವುದರಿಂದ ಇಡೀ ತೋಟಗಳೇ ಸಂಪೂರ್ಣವಾಗಿ ಹಾಳಾಗಿ ಹೋಗಿವೆ.

ತೆಂಗು ಬೆಳೆಯನ್ನು ಕಾಡುತ್ತಿರುವ ಕಪ್ಪು ತಲೆ ಹುಳುವಿನ ಬಾಧೆಯಿಂದಾಗಿ, ಬಹುವಾರ್ಷಿಕವಾಗಿ ದೊರೆಯುತ್ತಿದ್ದ ಬೆಳೆ ಉತ್ಪನ್ನವನ್ನು ಶಾಶ್ವತವಾಗಿ ಕಳೆದುಕೊಂಡು ಆರ್ಥಿಕವಾಗಿ ಅತ್ಯಂತ ದೊಡ್ಡ ಮಟ್ಟದಲ್ಲಿ ನಷ್ಟಕ್ಕೊಳಗಾಗಿರುವ ತೆಂಗು ಬೆಳೆಗಾರರಿಗೆ ಅನಿರೀಕ್ಷಿತವಾಗಿ ಒದಗಿರುವ ಈ ಸಂಕಷ್ಟವನ್ನು ಪರಿಹರಿಸಲು ಸರ್ಕಾರ ಇದುವರೆಗೆ ಯಾವುದೇ ಸೂಕ್ತ ಕ್ರಮವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:** ರಾಜ್ಯದಲ್ಲಿ ತೆಂಗು ಬೆಳೆಯನ್ನು 5.65 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, 24.76 ಲಕ್ಷ ಮೆಟ್ರಿಕ್ ಟನ್ ಗಳಷ್ಟು ಉತ್ಪಾದನೆಯಾಗಿರುತ್ತದೆ. ತೆಂಗು ಬೆಳೆಯನ್ನು ಪ್ರಮುಖವಾಗಿ ಹಾಸನ, ತುಮಕೂರು, ಚಿತ್ರದುರ್ಗ, ಮಂಡ್ಯ, ಮೈಸೂರು, ಬೆಂಗಳೂರು ದಕ್ಷಿಣ (ರಾಮನಗರ), ಚಿಕ್ಕಮಗಳೂರು, ದಾವಣಗೆರೆ, ಶಿವಮೊಗ್ಗ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಬೆಳೆಯಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಹೆಚ್ಚಿದ ತಾಪಮಾನದಿಂದ ಕಪ್ಪು ತಲೆ ಹುಳುವಿನ ಬಾಧೆಯಿಂದ ಅಂದಾಜು 62,044 ಹೆಕ್ಟೇರ್ ಪ್ರದೇಶ ಹಾನಿಯಾಗಿರುವುದು ವರದಿಯಾಗಿರುತ್ತದೆ. ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಘೋಷಣೆ ಕಂಡಿಕೆ 55 ರನ್ವಯ ಕಪ್ಪು ತಲೆ ಹುಳು ಹಾಗೂ ಬಿಳಿ ನೊಣ ಬಾದೆಯ ಕುರಿತು ವೈಜ್ಞಾನಿಕ ಸಮೀಕ್ಷೆ ನಡೆಸಲು ಬೆಳೆ ಸಮೀಕ್ಷೆ ಮಾದರಿಯಂತೆ ಪ್ರತ್ಯೇಕ ಮೊಬೈಲ್ App ಸಿದ್ದಪಡಿಸಲಾಗಿದ್ದು, ಸಮೀಕ್ಷೆ ನಡೆಸಲು ಕ್ರಮಕೈಗೊಳ್ಳಲಾಗುತ್ತಿದೆ.

**ಇಲಾಖೆಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:**

1. **ತೆಂಗಿನ ತೋಟಗಳ ಪುನ:ಶ್ಚೇತನ, ಮರುನಾಟಿ ಮತ್ತು ನಿರ್ವಹಣೆ ಕಾರ್ಯಕ್ರಮ;**
   ತೆಂಗು ಅಭಿವೃದ್ಧಿ ಮಂಡಳಿ ವತಿಯಿಂದ ತೆಂಗಿನ ತೋಟಗಳ ಪುನ:ಶ್ಚೇತನ, ಮರುನಾಟಿ ಮತ್ತು ನಿರ್ವಹಣೆಗಾಗಿ ಪ್ರತಿ ಫಲಾನುಭವಿಗೆ ಒಂದು ಹೆಕ್ಟೇರ್ ವರೆಗೆ ರೂ. 54,000/- ಗಳನ್ನು ನೀಡಲಾಗುತ್ತಿದೆ. ಮೊದಲನೇ ವರ್ಷ ರೂ.45,250/- ಗಳನ್ನು ಹಾಗೂ ಎರಡನೇ ವರ್ಷದ ನಿರ್ವಹಣೆಗೆ ರೂ.8,750/- ಗಳ ಸಹಾಯಧನವನ್ನು ನೀಡಲಾಗುತ್ತಿದೆ. 2023-24 ನೇ ಸಾಲಿನಲ್ಲಿ ಈ ಕಾರ್ಯಕ್ರಮದಡಿ 2423.50 ಹೆಕ್ಟೇರ್ ಗಳಿಗೆ ರೂ. 951.19 ಲಕ್ಷಗಳ ಸಹಾಯಧನ ಒದಗಿಸಲಾಗಿದ್ದು, 2024-25ನೇ ಸಾಲಿನ ಆರ್ಥಿಕ ವರ್ಷದ ಅಂತ್ಯಕ್ಕೆ ಅನುದಾನ ಬಿಡುಗಡೆಯಾಗಿದ್ದರಿಂದ ಸದರಿ ಅನುದಾನವನ್ನು ಪ್ರಸಕ್ತ ಸಾಲಿನಲ್ಲಿ ಮೊದಲನೇ ವರ್ಷದ ಈ ಕಾರ್ಯಕ್ರಮದ ನಿರ್ವಹಣೆಗಾಗಿ ರೂ.186.04 ಲಕ್ಷಗಳನ್ನು ವಿನಿಯೋಗಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ. 2025-26ನೇ ಸಾಲಿನಲ್ಲಿ ಈ ಕಾರ್ಯಕ್ರಮದಡಿಯಲ್ಲಿ 1000 ಹೆಕ್ಟೇರ್ ವಿಸ್ತೀರ್ಣದಲ್ಲಿ ಅನುಷ್ಠಾನಗೊಳಿಸಲು ರೂ. 452.50 ಲಕ್ಷಗಳ ಅನುದಾನ ನಿಗದಿಯಾಗಿದ್ದು, ಅನುಷ್ಠಾನ ಕಾರ್ಯ ಪ್ರಗತಿಯಲ್ಲಿದೆ.

2. **ರೈತರ ತಾಕುಗಳಲ್ಲಿ ಪ್ರಾತ್ಯಕ್ಷತೆ ಹಾಗೂ ನಿರ್ವಹಣೆ ಕಾರ್ಯಕ್ರಮ;**
   ರೈತರ ತಾಕುಗಳಲ್ಲಿ ಪ್ರಾತ್ಯಕ್ಷತೆ ಹಾಗೂ ನಿರ್ವಹಣೆಗಾಗಿ ಒಂದು ಹೆಕ್ಟೇರ್ ಗೆ ರೂ. 35,000/- ಗಳನ್ನು 2 ವರ್ಷಗಳ ಅವಧಿಗೆ, ಮೊದಲನೇ ವರ್ಷ ರೂ.17,500/- ಗಳು ಮತ್ತು ಎರಡನೇ ವರ್ಷದಲ್ಲಿ ರೂ.17,500/- ಗಳಂತೆ ಸಹಾಯಧನ ನೀಡಲಾಗುತ್ತಿದೆ. ರೋಗ ಮತ್ತು ಕೀಟಬಾಧಿತ ತಾಕುಗಳನ್ನು ಗುಚ್ಚಗಳಲ್ಲಿ (Clusters) ಆಯ್ಕೆ ಮಾಡಿ ಸಹಾಯಧನ ನೀಡಲಾಗಿರುತ್ತದೆ. 2023-24 ನೇ ಸಾಲಿನಲ್ಲಿ ಈ ಕಾರ್ಯಕ್ರಮದಡಿ ರೂ. 5,000/- ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, 28,420 ಹೆಕ್ಟೇರ್ ಗಳಲ್ಲಿ 41,185

ಫಲಾನುಭವಿಗಳಿಗೆ ಸಹಾಯಧನ ಒದಗಿಸಲಾಗಿದೆ. 2024-25ನೇ ಸಾಲಿನ ಆರ್ಥಿಕ ವರ್ಷದ ಅಂತ್ಯಕ್ಕೆ ರೂ.4,973.45 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದರಿಂದ ಪ್ರಸಕ್ತ ಸಾಲಿನಲ್ಲಿ ಮೂದಲನೇ ವರ್ಷದ ನಿರ್ವಹಣೆಗಾಗಿ ವಿನಿಯೋಗಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ.

3. ಕಪ್ಪು ತಲೆ ಹುಳುವಿನ ನಿಯಂತ್ರಣಕ್ಕಾಗಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 23 ಪ್ರಯೋಗ ಶಾಲೆಗಳಲ್ಲಿ ಗೋನಿಯೋಜಸ್ ಎಂಬ ಪರೋಪ ಜೀವಿಗಳನ್ನು ಉತ್ಪಾದನೆ ಮಾಡಿ ಉಚಿತವಾಗಿ ವಿತರಿಸಲಾಗುತ್ತಿದೆ. 2024-25 ನೇ ಸಾಲಿನಲ್ಲಿ ರೂ. 140.00 ಲಕ್ಷಗಳ ಅನುದಾನಕ್ಕೆ 328.44 ಲಕ್ಷ ಸಂಖ್ಯೆಯ ಪರೋಪ ಜೀವಿಗಳನ್ನು ಉತ್ಪಾದಿಸಿ 6,969 ಫಲಾನುಭವಿಗಳಿಗೆ ವಿತರಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ರೂ. 130.00 ಲಕ್ಷಗಳ ಅನುದಾನ ನಿಗದಿಯಾಗಿದ್ದು, ಪರೋಪ ಜೀವಿಗಳನ್ನು ಉತ್ಪಾದಿಸಿ ಉಚಿತವಾಗಿ ವಿತರಿಸಲಾಗುತ್ತಿದೆ.

4. ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಡಿ ತೆಂಗು ಸೇರಿದಂತೆ ವಿವಿಧ ತೋಟಗಾರಿಕಾ ಬೆಳೆಗಳಿಗೆ ಸಸ್ಯ ಸಂರಕ್ಷಣಾ ಔಷಧಿಗಳ ಖರೀದಿಗಾಗಿ ಪ್ರತಿ ಹೆಕ್ಟೇರಿಗೆ ತಗಲುವ ಘಟಕ ವೆಚ್ಚ ರೂ. 10,000/- ಗಳಲ್ಲಿ ಶೇ.75ರಂತೆ ಸಾಮಾನ್ಯ ವರ್ಗದ ರೈತರಿಗೆ ರೂ.7,500/- ಗಳನ್ನು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ರೈತರಿಗೆ ಶೇ.90ರಂತೆ ರೂ.9,000/- ಗಳ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಒಟ್ಟು 340.00 ಲಕ್ಷಗಳ ಅನುದಾನ ನಿಗದಿಪಡಿಸಿದ್ದು, ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ.

5. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ತೆಂಗು ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ರೂ.5,000/- ಪ್ರತಿ ಹೆಕ್ಟೇರ್ ಘಟಕ ವೆಚ್ಚದ ಶೇ.30ರಂತೆ ಪ್ರತಿ ಹೆಕ್ಟೇರಿಗೆ ರೂ.1,500/- ರಂತೆ 2ಹೆಕ್ಟೇರ್ ರವರೆಗೆ ರೂ.3,000/-ಗಳ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಒಟ್ಟು ರೂ.525.00 ಲಕ್ಷಗಳ ಅನುದಾನ ನಿಗದಿಪಡಿಸಿ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ.

6. ಕಪ್ಪು ತಲೆ ಹುಳುವಿನ ನಿಯಂತ್ರಣಕ್ಕಾಗಿ ಇಲಾಖಾ ಪ್ರಯೋಗ ಶಾಲೆಗಳಲ್ಲಿ ಗೋನಿಯೋಜಸ್ ಪರೋಪ ಜೀವಿಗಳ ಉತ್ಪಾದನೆ ಮಾಡಿ ಉಚಿತವಾಗಿ ವಿತರಿಸಲು ರೂ.50.00 ಲಕ್ಷಗಳ ಹೆಚ್ಚುವರಿ ಅನುದಾನ ನೀಡುವಂತೆ ತೆಂಗು ಅಭಿವೃದ್ಧಿ ಮಂಡಳಿ, ಕೊಚ್ಚಿ, ಕೇರಳ ರವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.

7. ತೆಂಗಿನ ಬೆಳೆಯಲ್ಲಿ ಕಂಡು ಬರುವ ರೋಗ/ಕೀಟಗಳ ಹತೋಟಿ ಕ್ರಮಗಳ ಕುರಿತು ಅರಿವು ಮೂಡಿಸಲು ವಿಷಯ ತಜ್ಞರು, ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯ, ತಜ್ಞರು, ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆ (CPCRI), ಕಾಸರಗೋಡು ಹಾಗೂ ತೆಂಗು ಅಭಿವೃದ್ಧಿ ಮಂಡಳಿಯ ಅಧಿಕಾರಿಗಳ ಸಹಯೋಗದೊಂದಿಗೆ 12,500 ರೈತರಿಗೆ 85 ತರಬೇತಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿರುತ್ತದೆ.

HORTI 368 HGM 2025(E)

**(ಎಸ್. ಎಸ್. ಮಲ್ಲಿಕಾರ್ಜುನ್)**

ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು